ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಉನಿ : ಸುಮಪ : 2018–19 :** **ದಿನಾಂಕ : 29–10–2018**

# ಪತ್ರಿಕಾ ಆಮಂತ್ರಣ

1. ಪತ್ರಿಕಾಗೋಷ್ಠಿ:

ಸಮಾಜ ಕಲ್ಯಾಣ ಇಲಾಖೆ ನೂತನವಾಗಿ ಜಾರಿಗೆ ತರಲಿರುವ ಸಮೃದ್ದಿ ಯೋಜನೆ ಕುರಿತು.
ಪ್ರಿಯಾಂಕ್ ಖರ್ಗೆ, ಸಮಾಜ ಕಲ್ಯಾಣ ಸಚಿವರು.

ದಿನಾಂಕ: 30–10–2018, ಮಂಗಳವಾರ, ಸಮಯ: ಬೆಳಿಗ್ಗೆ 11–45 ಗಂಟೆಗೆ
ಸ್ಥಳ: ಹೋಟೆಲ್ ತಾಜ್ ವೆಸ್ಟೆಂಡ್, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು

2. ಪತ್ರಿಕಾಗೋಷ್ಠಿ:

2nd NGT Regional Monitoring Committee (South) ಸಭೆಯ ನಂತರ.

ದಿನಾಂಕ: 30–10–2018 ಮಂಗಳವಾರ ಸಮಯ: ಮಧ್ಯಾಹ್ನ 3–00 ಗಂಟೆಗೆ
ಸ್ಥಳ: ಕೊಠಡಿ ಸಂಖ್ಯೆ : 334, ಮೂರನೇ ಮಹಡಿ, ವಿಧಾನಸೌಧ, ಬೆಂಗಳೂರು.

ಸಂಖ್ಯೆ: 1190/1290

# ಪತ್ರಿಕಾ ಪ್ರಕಟಣೆ

## 'ಜಾಗೃತಿ ಅರಿವು–2018' ರ ಪ್ರತಿಜ್ಞಾ ವಿಧಿ – ಸಚಿವರಿಂದ ಬೋಧನೆ

ಬೆಂಗಳೂರು, ಅಕ್ಟೋಬರ್ 29 (ಕರ್ನಾಟಕ ವಾರ್ತೆ) :

ವಿಧಾನಸೌಧದ ಸಂಶೋಧನೆ ಸಭಾಂಗಣದಲ್ಲಿ ಇಂದು ಏರ್ಪಡಿಸಲಾಗಿದ್ದ 'ಜಾಗೃತಿ ಅರಿವು–2018' ರ ಪ್ರತಿಜ್ಞಾ ವಿಧಿಯನ್ನು ಭಾರಿ ಮತ್ತು ಮಧ್ಯಮ ಕೈಗಾರಿಕೆ, ಮಾಹಿತಿ ಮತ್ತು ತಂತ್ರಜ್ಞಾನ ಸಚಿವ ಕೆ.ಜೆ. ಜಾರ್ಜ್ ಅವರು ಬೋಧಿಸಿದರು.

ಈ ಸಂದರ್ಭದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ವಿಜಯಭಾಸ್ಕರ್, ಅಭಿವೃದ್ಧಿ ಆಯುಕ್ತರು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳಾದ ಶ್ರೀಮತಿ ವಂದಿತಾ ಶರ್ಮಾ, ಸರ್ಕಾರದ ಅಪರ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆಯ ಐ.ಎಸ್.ಎನ್. ಪ್ರಸಾದ್, ಆಡಳಿತ ಮತ್ತು ಸುಧಾರಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಅಂಜುಂಪರ್ವೆಜ್ ಸೇರಿದಂತೆ ಸರ್ಕಾರದ ಹಿರಿಯ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

**ಪ್ರತಿಜ್ಞಾ ವಿಧಿ:**

ನಮ್ಮ ದೇಶದ ಆರ್ಥಿಕ, ರಾಜಕೀಯ ಮತ್ತು ಸಾಮಾಜಿಕ ಅಭಿವೃದ್ಧಿಗೆ ಭ್ರಷ್ಟಾಚಾರವು ಒಂದು ಪ್ರಮುಖ ಅಡಚಣೆಯಾಗಿದೆಯೆಂದು ನಾನು ನಂಬುತ್ತೇನೆ. ಭಷ್ಟಾಚಾರವನ್ನು ನಿರ್ಮೂಲನೆ ಮಾಡಲು ಸರ್ಕಾರ, ನಾಗರಿಕರು ಮತ್ತು ಖಾಸಗಿ ವಲಯದಂತಹ ಎಲ್ಲಾ ಪಾಲುದಾರರು ಒಟ್ಟಾಗಿ ಕೆಲಸ ಮಾಡಬೇಕಾಗುತ್ತದೆಂದು ನಾನು ನಂಬುತ್ತೇನೆ.

ಪ್ರತಿ ನಾಗರಿಕನು ಜಾಗರೂಕನಾಗಿದ್ದು, ಎಲ್ಲ ಸಮಯದಲ್ಲೂ ಉನ್ನತ ಗುಣಮಟ್ಟದ ಪ್ರಾಮಾಣಿಕತೆ ಮತ್ತು ನಿಷ್ಠೆಗೆ ಬದ್ಧನಾಗಿರಬೇಕೆಂದು ಹಾಗೂ ಭ್ರಷ್ಟಾಚಾರದ ವಿರುದ್ಧ ಹೋರಾಟವನ್ನು ಬೆಂಬಲಿಸಬೇಕೆಂದು ನಾನು ಅರಿತಿದ್ದೇನೆ.

ಜೀವನದ ಎಲ್ಲಾ ಕ್ಷೇತ್ರಗಳಲ್ಲಿ ಪ್ರಾಮಾಣಿಕತೆ ಮತ್ತು ಕಾನೂನಿತ ನಿಯಮಗಳನ್ನು ಅನುಸರಿಸುತ್ತೇನೆ, ಲಂಚವನ್ನು ಪಡೆಯುವುದಿಲ್ಲ ಹಾಗೂ ನೀಡುವುದೂ ಇಲ್ಲ, ಎಲ್ಲಾ ಕಾರ್ಯಗಳನ್ನು ಪ್ರಾಮಾಣಿಕ ಮತ್ತು ಪಾರದರ್ಶಕ ರೀತಿಯಲ್ಲಿ ನಿರ್ವಹಿಸುತ್ತೇನೆ, ಸಾರ್ವಜನಿಕ ಹಿತಾಸಕ್ತಿಯಲ್ಲಿ ಕಾರ್ಯನಿರ್ವಹಿಸುತ್ತೇನೆ, ವೈಯಕ್ತಿಕ ನಡವಳಿಕೆಯಲ್ಲಿ ನಿಷ್ಠೆ ಪ್ರದರ್ಶಿಸುವ ಮೂಲಕ ಮಾದರಿಯಾಗಿರುತ್ತೇನೆ, ಯಾವುದೇ ಭ್ರಷ್ಟಾಚರದ ಘಟನೆಯನ್ನು ಸೂಕ್ತ ಸಂಸ್ಥೆಗೆ ವರದಿ ಮಾಡುತ್ತೇನೆ.

ಸಂಖ್ಯೆ: 1191/1291

## ನವೆಂಬರ್ 10 ಮತ್ತು 11 ರಂದು
## ಕಬ್ಬನ್ ಉದ್ಯಾನವನದಲ್ಲಿ ಮಕ್ಕಳ ಹಬ್ಬ

ಬೆಂಗಳೂರು, ಅಕ್ಟೋಬರ್ 29 (ಕರ್ನಾಟಕ ವಾರ್ತೆ) :

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮಕ್ಕಳ ದಿನಾಚರಣೆ ಅಂಗವಾಗಿ ನವೆಂಬರ್ 10, 11 ಹಾಗೂ 14 ರಂದು ನಗರದ ಕಬ್ಬನ್ ಪಾರ್ಕ್‌ನಲ್ಲಿ ಮಕ್ಕಳ ಹಬ್ಬವನ್ನು ಹಮ್ಮಿಕೊಂಡಿದೆ.

ಮಕ್ಕಳ ಹಬ್ಬ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅವರು ನವೆಂಬರ್ 10 ರಂದು ಕಬ್ಬನ್ ಉದ್ಯಾನವನದಲ್ಲಿ ಉದ್ಘಾಟಿಸಲಿದ್ದಾರೆ.

ನವೆಂಬರ್ 14 ರ ಮಕ್ಕಳ ದಿನಾಚರಣೆ ಕಾರ್ಯಕ್ರಮವನ್ನು ರಾಜ್ಯಪಾಲ ವಜುಭಾಯಿ ವಾಲ ಅವರು ಉದ್ಘಾಟಿಸಲಿದ್ದಾರೆ.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ನಾಟಕ ಅಕಾಡೆಮಿ, ಲಲಿತಕಲಾ ಅಕಾಡೆಮಿ, ಸಾಹಿತ್ಯ ಅಕಾಡೆಮಿ, ಶಿಲ್ಪಕಲಾ ಅಕಾಡೆಮಿ ಮತ್ತು ಜಾನಪದ ಅಕಾಡೆಮಿಗಳ ಮೇಲುಸ್ತುವಾರಿಯಲ್ಲಿ ನಾಟಕ, ಸಂಗೀತ, ಶಿಲ್ಪಕಲೆ, ಜಾನಪದ ಕಲಾ ಪ್ರದರ್ಶನ, ವಿವಿಧ ನೃತ್ಯ ಪ್ರಕಾರಗಳು, ಸಮೂಹ ನೃತ್ಯ, ಯಕ್ಷಗಾನ ಹಾಗೂ ಗಾರುಡಿ ಗೊಂಬೆ ಪ್ರದರ್ಶನ ಏರ್ಪಡಿಸಲಾಗಿದೆ.

ಯುವಜನ ಮತ್ತು ಕ್ರೀಡಾ ಇಲಾಖೆಯಿಂದ ಕುಸ್ತಿ, ಮಲ್ಲಕಂಬ, ಸ್ಕೇಟಿಂಗ್, ಬ್ಯಾಸ್ಕೆಟ್ ಬಾಲ್ ಹಾಗೂ ಇತರೆ ಸಾಹಸ ಕ್ರೀಡೆಗಳನ್ನು ಏರ್ಪಡಿಸಲಾಗಿದೆ.

ತೋಟಗಾರಿಕೆ ಇಲಾಖೆಯಿಂದ ಪುಷ್ಪ ಪ್ರದರ್ಶನ. ಇದಲ್ಲದೆ ಗ್ರಾಮೀಣ ಕ್ರೀಡೆಗಳಾದ ಬುಗುರಿ, ಗೋಲಿ, ಚೌಕಾಬಾರ, ಹಗ್ಗ ಜಗ್ಗಾಟ, ಚನ್ನೆಮಣೆ (ಅಳಗುಳಿ ಮಣೆ), ಹುಲಿ ಆಟ, ಲಗೋರಿ, ಮಡಿಕೆ ಒಡೆಯುವುದು. ತೆಂಗಿನ ಗರಿ ಸ್ಕೇಟಿಂಗ್ ಆಟಗಳನ್ನು ಹಮ್ಮಿಕೊಂಡು ಹಳ್ಳಿ ವಾತಾವರಣವನ್ನು ಮೂಡಿಸುವುದು.

ಚಿತ್ರಕಲೆ, ವೇಷಭೂಷಣ, ಜೇಡಿ ಮಣ್ಣಿನ ಆಕೃತಿಗಳ ಪ್ರಾತ್ಯಕ್ಷಿಕೆ ಮತ್ತು ಪ್ರದರ್ಶನ, ಮಕ್ಕಳ ಚಲನಚಿತ್ರ ಪ್ರದರ್ಶನ, ಗಾಂಧಿ 150 ಚಿತ್ರ ಪ್ರದರ್ಶನ, ವಿವಿಧ ಇಲಾಖೆಗಳಿಂದ ಮಾಹಿತಿ ಮಳಿಗೆಗಳು ತೆರೆಯಲಿವೆ.

ಸಂಖ್ಯೆ: 1192/1292

## ವಿಕಲಚೇತನ ಮತದಾರರನ್ನು ಮತಗಟ್ಟೆಗೆ ಕರೆದೊಯ್ಯಲು ವಾಹನ ವ್ಯವಸ್ಥೆ

ಬೆಂಗಳೂರು, ಅಕ್ಟೋಬರ್ 29 (ಕರ್ನಾಟಕ ವಾರ್ತೆ) :

ರಾಷ್ಟ್ರದಲ್ಲಿಯೇ ಪ್ರಪ್ರಥಮ ಬಾರಿಗೆ ಭಾರತೀಯ ಚುನಾವಣಾ ಆಯೋಗವು ವಿಕಲಚೇತನರನ್ನು ಮತದಾನ ಮಾಡುವಂತೆ ಪ್ರೋತ್ಸಾಹಿಸಲು ರಾಜ್ಯದಲ್ಲಿ ನಡೆಯುವ ಉಪ ಚುನಾವಣೆಯ ಸಂದರ್ಭದಲ್ಲಿ ಮತದಾನದ ದಿನವಾದ ನವೆಂಬರ್ 3 ರಂದು ವಿಕಲಚೇತನ ಮತದಾರರನ್ನು ಅವರ ಮನೆ ಬಾಗಿಲಿನಿಂದ ಮತಗಟ್ಟೆಗೆ ಕರೆದೊಯ್ದು ಮತ್ತೆ ಅವರ ಮನೆಗೆ ಕರೆತರಲು ವಾಹನ ಸೌಲಭ್ಯವನ್ನು ವ್ಯವಸ್ಥೆ ಮಾಡಿದೆ.

ವಿಕಲಚೇತನ ಮತದಾರರು ಕೂಡಾ ಪ್ರಜಾಪ್ರಭುತ್ವದಲ್ಲಿ ಮತದಾನ ಮಾಡುವ ಮೂಲಕ ತಮ್ಮ ಹಕ್ಕನ್ನು ಚಲಾಯಿಸಲು ಚುನಾವಣಾ ಆಯೋಗ ಈ ಹೊಸ ಸೌಲಭ್ಯವನ್ನು ರಾಜ್ಯದಲ್ಲಿ ಪ್ರಪ್ರಥಮ ಬಾರಿಗೆ ಜಾರಿಗೊಳಿಸುತ್ತಿದೆ. ಆಸಕ್ತರು ಚುನಾವಣಾ ಆಯೋಗದ (Chunavana) ಆ್ಯಪ್‌ನಲ್ಲಿ ಇಂದಿನಿಂದ ನವೆಂಬರ್ 1 ರ ರಾತ್ರಿ 11.59 ಗಂಟೆವರೆಗೆ ನೋಂದಾಯಿಸಿಕೊಳ್ಳಬಹುದಾಗಿದೆ.

ಚುನಾವಣಾ ಆಯೋಗದ ಆ್ಯಪ್ (Chunavana) ಗೂಗಲ್ ಸ್ಟೋರ್‌ನಿಂದ ಸ್ಮಾರ್ಟ್ ಫೋನಿನಲ್ಲಿ ಡೌನ್‌ಲೋಡ್ ಮಾಡಿಕೊಂಡು ವಾಹನ ಸೇವೆಗಳ ವಿಭಾಗಕ್ಕೆ ಭೇಟಿ ನೀಡಿ ಅಲ್ಲಿ ವಿಕಲಚೇತನರು ತಮ್ಮ ಚುನಾವಣಾ ಗುರುತಿನ ಚೀಟಿಯ ಸಂಖ್ಯೆ ಹಾಗೂ ಮೊಬೈಲ್ ಸಂಖ್ಯೆಯನ್ನು ನಮೂದಿಸಿದಾಗ ಅವರ ನೋಂದಾಯಿಸಿಕೊಂಡ ಮೊಬೈಲ್‌ಗೆ ಒ.ಟಿ.ಪಿ. ಸಂಖ್ಯೆ ಬರುತ್ತದೆ. ಈ ಸಂಖ್ಯೆಯನ್ನು ಪುನರ್ ನಮೂದಿಸುವ ಮೂಲಕ ನೋಂದಾಯಿಸಿಕೊಂಡು ವಾಹನ ಸೌಲಭ್ಯವನ್ನು ಪಡೆಯಬಹುದಾಗಿದೆ.

ಚುನಾವಣಾ ಆಯೋಗ ಈಗಾಗಲೇ ರಾಜ್ಯದಲ್ಲಿರುವ ಮತದಾನದ ಹಕ್ಕನ್ನು ಹೊಂದಿರುವ ವಿಕಲಚೇತನರ ಮಾಹಿತಿಯನ್ನು ಸಮಾಜ ಕಲ್ಯಾಣ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗಳಿಂದ ಪಡೆದಿದೆ. ಪ್ರಸ್ತುತ ನಡೆಯಲಿರುವ ಉಪ ಚುನಾವಣೆಯ ಮತಕ್ಷೇತ್ರಗಳ ವ್ಯಾಪ್ತಿಯಲ್ಲಿ ಈ ನೂತನ ಸೌಲಭ್ಯ ವಿಸ್ತರಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಸಂಖ್ಯೆ: 1193/1293

## 'ಏಕತೆಗಾಗಿ ಓಟ'

ಬೆಂಗಳೂರು, ಅಕ್ಟೋಬರ್ 29 (ಕರ್ನಾಟಕ ವಾರ್ತೆ) :

ಸರ್ದಾರ್ ವಲ್ಲಭಬಾಯ್ ಪಟೇಲ್ ಅವರ ಜನ್ಮ ದಿನದ ಪ್ರಯುಕ್ತ ಅಕ್ಟೋಬರ್ 31 ರಂದು ರಾಷ್ಟ್ರೀಯ ಏಕತಾ ದಿನವನ್ನಾಗಿ ಆಚರಿಸುತ್ತಿರುವ ಹಿನ್ನೆಲೆಯಲ್ಲಿ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಜಾಗೃತದಳ ವತಿಯಿಂದ 'ಏಕತೆಗಾಗಿ ಓಟ' ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ನಗರದ ಕೆ.ಆರ್. ಸರ್ಕಲ್‌ನಲ್ಲಿರುವ ಬೆಸ್ಕಾಂ ಕೇಂದ್ರ ಕಚೇರಿಯಲ್ಲಿ ಅಂದು ಬೆಳಿಗ್ಗೆ 6–30 ಗಂಟೆಗೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಸಂಖ್ಯೆ: 1194/1294

## ಕೇಂದ್ರ ಸಚಿವ ಅನಂತ್‌ಕುಮಾರ್ ಅವರ ಆರೋಗ್ಯ ವಿಚಾರಿಸಿದ

## **ಕಂದಾಯ ಸಚಿವ ದೇಶಪಾಂಡೆ: ಆಸ್ಪತ್ರೆಗೆ ಭೇಟಿ**

**ಬೆಂಗಳೂರು, ಅಕ್ಟೋಬರ್ 29 (ಕರ್ನಾಟಕ ವಾರ್ತೆ) :**

ಅನಾರೋಗ್ಯದಿಂದ ಬಳಲುತ್ತಿರುವ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಅನಂತ್‌ಕುಮಾರ್ ಅವರ ಯೋಗಕ್ಷೇಮವನ್ನು ವಿಚಾರಿಸಲು ಕಂದಾಯ & ಕೌಶಲ್ಯಾಭಿವೃದ್ಧಿ ಸಚಿವ ಆರ್.ವಿ.ದೇಶಪಾಂಡೆಯವರು ಇಂದು ನಗರದ ಶಂಕರ ಕ್ಯಾನ್ಸರ್ ಆಸ್ಪತ್ರೆಗೆ ಭೇಟಿ ನೀಡಿದ್ದರು.

ಈ ಸಂದರ್ಭದಲ್ಲಿ ಅನಂತ್‌ಕುಮಾರ್ ಅವರ ಕುಟುಂಬ ಸದಸ್ಯರೊಂದಿಗೆ ಮಾತನಾಡಿ, ಅವರ ಆರೋಗ್ಯವನ್ನು ವಿಚಾರಿಸಿದ ಸಚಿವರು, ``ಅನಂತ್‌ಕುಮಾರ್ ಅವರು ಶೀಘ್ರುವಾಗಿ ಗುಣಮುಖರಾಗಲಿ,'' ಎಂದು ಹಾರೈಸಿದರು.

ಇದೇ ವೇಳೆಯಲ್ಲಿ, ಆಸ್ಪತ್ರೆಯ ಮುಖ್ಯಸ್ಥ ಮತ್ತು ಹೆಸರಾಂತ ವೈದ್ಯರಾದ ಡಾ.ಶ್ರೀನಾಥ್ ಅವರೊಂದಿಗೂ ಮಾತನಾಡಿದ ದೇಶಪಾಂಡೆಯವರ ಕೇಂದ್ರ ಸಚಿವರ ಆರೋಗ್ಯದ ಸ್ಥಿತಿಗತಿ ಬಗ್ಗೆ ಮಾತನಾಡಿದರು ಎಂದು ಪ್ರಕಟಣೆ ತಿಳಿಸಿದೆ.